ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

## ಜಿಲ್ಲಾ ಆರೋಗ್ಯ ಮತ್ತು ಕು.ಕ.ಸಂಘ. ಬೆಂಗಳೂರು ನಗರ ಜಿಲ್ಲೆ

ಹಳೇ ಟಿ.ಬಿ ಆಸ್ಪತ್ರೆ ಆವರಣ, ಹಳೇ ಮದ್ರಾಸ್ ರಸ್ತೆ, ಇಂದಿರಾನಗರ, ಬೆಂಗಳೂರು – 38.

NATIONAL HEALTH MISSION
राष्ट्रीय स्वास्थ्य मिशन

ಸಂಖ್ಯೆ: ಡಿಹೆಚ್‌ಎಸ್/ಬೆಂ.ನ.ಜಿ/ಎನ್‌ಹೆಚ್‌ಎಂ/ಗುಪಿ/06/20205–26 ದಿನಾಂಕ: 17.01.2026

## ನೇಮಕಾತಿ ಪ್ರಕಟಣೆ

ಬೆಂಗಳೂರು ನಗರ ಜಿಲ್ಲೆಯಲ್ಲಿ 2025–26ನೇ ಸಾಲಿನ ಸಾಮಾನ್ಯ ವರ್ಗಾವಣೆಯಿಂದ ಶುಶ್ರೂಷಣಾಧಿಕಾರಿಗಳ ಹುದ್ದೆಗಳು ಖಾಲಿ –ಯಾಗಿರುವುದರಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ನಿಟ್ಟಿನಲ್ಲಿ ಪ್ರಸ್ತುತ ಖಾಲಿಯಾಗಿರುವ ಶುಶ್ರೂಷಣಾಧಿಕಾರಿಗಳ ಹುದ್ದೆಗಳನ್ನು ಎನ್.ಹೆಚ್.ಎಂ ಯೋಜನೆಯಡಿ ಗುತ್ತಿಗೆ ಆಧಾರದ ಮೇಲೆ ನಿಯಾಮಾನುಸಾರ ಮೇರಿಟ್ ಕಮ್ ರೋಸ್ಟರ್ ಅನ್ವಯ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳನ್ನು ನೇರ ಸಂದರ್ಶನಕ್ಕೆ ಆಹ್ವಾನಿಸಲಾಗಿದೆ. ಹುದ್ದೆಯ ವಿವರಗಳನ್ನು ಈ ಕೆಳಕಂಡಂತೆ ವಿವರಿಸಲಾಗಿದೆ.

| ಕ್ರ ಸ | ಹುದ್ದೆಗಳ ವಿವರ | ವಿದ್ಯಾರ್ಹತೆ | ಮಾಸಿಕ ಸಂಚಿತ ವೇತನ | ಒಟ್ಟು ಹುದ್ದೆಗಳ ಸಂಖ್ಯೆ | ಅಭ್ಯರ್ಥಿ ವೈಯೋಮಿತಿ | ಕಾರ್ಯನಿರ್ವಹಿಸ – ಬೇಕಾದ ಸ್ಥಳ |
|---|---|---|---|---|---|---|
| 1 | ಶುಶ್ರೂಷಣಾಧಿ –ಕಾರಿಗಳು | ಮಾನ್ಯತೆ ಪಡೆದ ನರ್ಸಿಂಗ್ ಶಾಲೆಯಲ್ಲಿ ಜಿಎನ್‌ಎಂ / ಬಿಎಸ್‌ಸಿ ವಿದ್ಯಾರ್ಹತೆ ಹಾಗೂ ಕೆಎನ್‌ಸಿ ನೋಂದಣಿ ಹೊಂದಿ ಕಂಪ್ಯೂಟರ್ ಸಾಕ್ಷರತೆ ಹೊಂದಿರಬೇಕು. (ಮಹಿಳಾ ಅಭ್ಯರ್ಥಿಗಳು ಮಾತ್ರ) | 18,714/– | 55 | 45 ವರ್ಷ ಒಳಗಿರ –ತಕ್ಕದ್ದು | • ಸಾ.ಆಸ್ಪತ್ರೆ ಆನೇಕಲ್–2<br>• ಸಿ ವಿ ರಾಮನ್ ಆಸ್ಪತ್ರೆ–8<br>• ಕೆ ಸಿ ಜನರಲ್ ಆಸ್ಪತ್ರೆ–21<br>• ಸಾ.ಆಸ್ಪತ್ರೆ ಜಯನಗರ–19<br>• ಸಾ.ಆಸ್ಪತ್ರೆ ಕೆ ಆರ್ ಪುರಂ–3<br>• ಸಾ.ಆಸ್ಪತ್ರೆ ಯಲಹಂಕ–2 |

- ಆಸಕ್ತಿಯುಳ್ಳ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ದಿನಾಂಕ:27–01–2026, 02–02–2026, 09–02–2026, 16–02–2026, 23–02–2026, 02–03–2026, 09–03–2026, 16–03–2026 ದಿನಾಂಕಗಳಂದು ಮಾತ್ರ ಬೆಳ್ಳಿಗೆ 10:30 ಗಂಟೆಯಿಂದ ಮಧ್ಯಾಹ್ನ 01:00 ಗಂಟೆ ಒಳಗಾಗಿ ತಮ್ಮ ಮೂಲ ದಾಖಲೆಗಳೊಂದಿಗೆ ಹಾಗೂ ನಕಲು ಪ್ರತಿಗಳೊಂದಿಗೆ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳ ಕಛೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣ, ಹಳೇ ಟಿ.ಬಿ ಆಸ್ಪತ್ರೆ, ಹಳೇ ಮದ್ರಾಸ್ ರಸ್ತೆ, ಸ್ವಾಮಿ ವಿವೇಕನಂದ ಮೆಟ್ರೋ ನಿಲ್ದಾಣದ ಹತ್ತಿರ, ಇಂದಿರಾನಗರ, ಬೆಂಗಳೂರು–38 ನಿಗದಿತ ಅರ್ಜಿ ನಮೂನೆಯನ್ನು ಪಡೆದು ನೋಂದಣಿ ಮಾಡಿಕೊಂಡು, ನೋಂದಣಿಯಾದ ಅರ್ಹ ಅಭ್ಯರ್ಥಿಗಳನ್ನು ಮಾತ್ರ ದಾಖಲಾತಿ ಪರಿಶೀಲನೆಗೆ ಪರಿಗಣಿಸಲಾಗುವುದು ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಆಧಾರದ ಮೇಲೆ ನೇಮಕಾತಿ ಆದೇಶವನ್ನು ನೀಡಲಾಗುವುದು ಎಂಬ ಷರತ್ತಿಗೆ ಒಳಪಟ್ಟಿರುತ್ತದೆ.

- ಈ ಆಯ್ಕೆಯು / ನೇಮಕಾತಿಯು ಎನ್‌ಹೆಚ್‌ಎಂ ಮಾರ್ಗಸೂಚಿಗಳಂತೆ ರೋಸ್ಟರ್ ಕಮ್ ಮೇರಿಟ್ ಅನ್ವಯ ನೇಮಕಾತಿ ಮಾಡಿಕೊಳ್ಳಲಾಗುವುದು, ಈ ಗುತ್ತಿಗೆ ನೇಮಕಾತಿ ಪ್ರಕ್ರಿಯೆಯಲ್ಲಿ ಅರ್ಹ ಮೀಸಲಾತಿ ಅಭ್ಯರ್ಥಿಗಳು ದೊರೆಯದೇ ಇರುವ ಸಂದರ್ಭದಲ್ಲಿ ಮಾತ್ರ ಸಾಮಾನ್ಯ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು (ಸುತ್ತೋಲೆ ಸಂಖ್ಯೆ: ಆಕುಕ 25 ಎಂಎಸ್‌ಎನ್ 2016 ದಿ:14–03–2016), ಈ ಆಯ್ಕೆ ಪ್ರಕ್ರಿಯೆಯಲ್ಲಿ ಯಾವುದೇ ಬದಲಾವಣೆಯಾದರೂ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ.

ಸಹಿ/–

ಜಿಲ್ಲಾ ಆರೋಗ್ಯ ಮತ್ತು ಕು ಕ ಅಧಿಕಾರಿಗಳು,
ಬೆಂಗಳೂರು ನಗರ ಜಿಲ್ಲೆ

ಡಿಐಪಿಆರ್/ಸಿಪಿ/5111/ಸಿಸಿಎಲ್/2025–26